| KARNATAKA MARITIME BOARD<br>BENGALURU | | |
|---|---|---|
| Name of the Newspaper | PRAJAVANI | |
| Date | 23-04-2025 | Language: KANNADA |

PRAJAVANI 24.04.2025

# ಮಂಗಳೂರಿನಲ್ಲಿ ವಾಟರ್ ಮೆಟ್ರೊ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕರ್ನಾಟಕದಲ್ಲಿ ಮೊದಲ ಬಾರಿಗೆ ವಾಟರ್ ಮೆಟ್ರೊ ಯೋಜನೆ ಅನುಷ್ಠಾನ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ.



ಸಿದ್ದರಾಮಯ್ಯ

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿ ಸಭೆಯಲ್ಲಿ 'ಕರ್ನಾಟಕ ಜಲ ಸಾರಿಗೆ ನೀತಿ 2024' ಬಿಡುಗಡೆ ಮಾಡಲಾಯಿತು. ಈ ವೇಳೆ, ಮಂಗಳೂರಿನ ಗುರುಪುರ-ನೇತ್ರಾವತಿ ನದಿಯಲ್ಲಿ ಆರಂಭಿಸಲಿರುವ ವಾಟರ್ ಮೆಟ್ರೊ ಯೋಜನೆಯ ಪ್ರಸ್ತಾವನೆಗೆ ಮುಖ್ಯಮಂತ್ರಿ ಅನುಮೋದನೆ ನೀಡಿದರು.

ಸಾಗರಮಾಲಾ ಯೋಜನೆಯಡಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಗೂ ಒಪ್ಪಿಗೆ ನೀಡಿದರು.

ಪುನರ್ವಸತಿ, ಬಂದರು ಸಂಬಂಧಿತ ಕಾರ್ಯಾಚರಣೆಗಳಿಗೆ ಭೂಮಿ ಹಂಚಿಕೆ ಮತ್ತು ಗುತ್ತಿಗೆ ಅವಧಿಯನ್ನು ಪರಿಶೀಲಿಸಿ ಪ್ರಸ್ತಾವನೆ ಸಲ್ಲಿಸಲು ಹಾಗೂ ಅತಿಕ್ರಮಣ ಮಾಡಿದವರನ್ನು ಕೂಡಲೇ ತೆರವುಗೊಳಿಸುವಂತೆ ಮುಖ್ಯಮಂತ್ರಿ ಸೂಚಿಸಿದರು.

ಉತ್ತರಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ದ್ವೀಪಗಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಡ್ರೋನ್ ಸರ್ವೇ ಮಾಡಿಸಿ, ಮೂರು ತಿಂಗಳ ಒಳಗೆ ವರದಿ ನೀಡುವಂತೆ ಅಲ್ಲಿನ ಜಿಲ್ಲಾಧಿಕಾರಿಗೆ ಸಿದ್ದರಾಮಯ್ಯ ನಿರ್ದೇಶನ ನೀಡಿದರು.

ಆಂಧ್ರಪ್ರದೇಶ, ವಿಶಾಖಪಟ್ಟಣ, ಕೇರಳ, ತಮಿಳುನಾಡು, ಗುಜರಾತ್‌ನಲ್ಲಿ ಬಂದರುಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂಬುದರ ಬಗ್ಗೆ ಅಧ್ಯಯನ ಮಾಡಿ ವರದಿ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಒಳನಾಡು ಮತ್ತು ಜಲಸಾರಿಗೆ ಸಚಿವ ಮಂಕಾಳ ವೈದ್ಯ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತು ಇತರ ಅಧಿಕಾರಿಗಳು ಇದ್ದರು.

https://www.prajavani.net/news/karnataka-news/jala-sarige-cm-siddaramaiah-meeting-water-metro-at-mangaluru-3258392

| KARNATAKA MARITIME BOARD<br>BENGALURU | | |
|---|---|---|
| Name of the Newspaper | SAMYUKTHA KARNATAKA | |
| Date | 23-04-2025 | Language: KANNADA |

# ವಾಟರ್ ಮೆಟ್ರೋ ಯೋಜನೆ ಪ್ರಸ್ತಾವನೆಗೆ ಅನುಮೋದನೆ

**ಸಂ.ಕ.ಸಮಾಚಾರ, ಬೆಂಗಳೂರು**

ಮಂಗಳೂರಿನ ಗುರುಪುರ–ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತ ಗೊಳಿಸುವ ಪ್ರಸ್ತಾವನೆಗೆ ಸಿಎಂ ಸಿದ್ದರಾಮಯ್ಯ ಅನುಮೋದನೆ ನೀಡಿದರು.

ಮುಖ್ಯಮಂತ್ರಿಗಳ ಕಾವೇರಿ ನಿವಾಸದಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿಯ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಬಂದರುಗಳ ಅಭಿವೃದ್ಧಿ, ಜಲಸಾರಿಗೆ ಯೋಜನೆಗಳ ಪ್ರಗತಿ ಹಾಗೂ ಸರಕು ಸಾಗಣೆಗೆ ಅವಶ್ಯವಿರುವ ಮೂಲ ಸೌಲಭ್ಯಗಳ ಬಗ್ಗೆ ಸಮಿತಿಯಲ್ಲಿ ಚರ್ಚಿಸಿದರು. ಸಾಗರ ಮಾಲಾ ಯೋಜನೆಯಡಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಒಪ್ಪಿಗೆ ನೀಡಿದರು.



ಪುನರ್ವಸತಿ, ಬಂದರು ಸಂಬಂಧಿತ ಕಾರ್ಯಾಚರಣೆಗಳಿಗೆ ಭೂಮಿ ಹಂಚಿಕೆ ಗುತ್ತಿಗೆ ಅವಧಿಯನ್ನು ಪರಿಶೀಲಿಸಿ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸುವ ಜತೆಗೆ ಅತಿಕ್ರಮಣ ಮಾಡಿಕೊಂಡಿರುವವರನ್ನು ಕೂಡಲೇ ಸ್ಥಳಾಂತರ ಮಾಡುವಂತೆ ಹೇಳಿದರು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ದ್ವೀಪಗಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಡ್ರೋಣ್ ಸರ್ವೇ ಮಾಡಿಸಿ ಇನ್ನು ಮೂರು ತಿಂಗಳೊಳಗಾಗಿ ವರದಿ ಸಲ್ಲಿಸುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಆಂಧ್ರಪ್ರದೇಶ, ವಿಶಾಖಪಟ್ಟಣ, ಕೇರಳ, ತಮಿಳುನಾಡು ಹಾಗೂ ಗುಜರಾತ್‌ಗಳಲ್ಲಿ ಬಂದರುಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂಬುದರ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಬಂದರು ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ, ಸೌಲಭ್ಯ ನೀಡುವುದಾಗಿ ಭರವಸೆ ನೀಡಿದರು.

| KARNATAKA MARITIME BOARD<br>BENGALURU | | |
|---|---|---|
| Name of the Newspaper | PRAJA PRAGATHI | |
| Date | 23-04-2025 | Language: KANNADA |

# ಮಂಗಳೂರು ವಾಟರ್ ಮೆಟ್ರೊ ಯೋಜನೆಗೆ ಸಿಎಂ ಅನುಮೋದನೆ



ಬೆಂಗಳೂರು, ಎ.23: ಮಂಗಳೂರಿನ ಗುರುಪುರ-ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೊ ಯೋಜನೆ ಕಾರ್ಯಗತ ಗೊಳಿಸುವ ಪ್ರಸ್ತಾವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಮೋದನೆ ನೀಡಿದ್ದಾರೆ.

ಬುಧವಾರ ತಮ್ಮ ಸರಕಾರಿ ನಿವಾಸ ಕಾವೇರಿಯಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿಯ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ರಾಜ್ಯದ ಬಂದರುಗಳ ಅಭಿವೃದ್ಧಿ, ಜಲಸಾರಿಗೆ ಯೋಜನೆಗಳ ಪ್ರಗತಿ, ಸರಕು ಸಾಗಣೆಗೆ ಅವಶ್ಯವಿರುವ ಮೂಲ ಸೌಲಭ್ಯಗಳ ಬಗ್ಗೆ ಚರ್ಚೆ ನಡೆಸಿದರು.

ಸಾಗರಮಾಲಾ ಯೋಜನೆಯಡಿಯಲ್ಲಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವಕ್ಕೆ ಒಪ್ಪಿಗೆ ನೀಡಿದ ಮುಖ್ಯಮಂತ್ರಿ, ಪುನರ್ವಸತಿ, ಬಂದರು ಸಂಬಂಧಿತ ಕಾರ್ಯಾಚರಣೆಗಳಿಗೆ ಭೂಮಿ ಹಂಚಿಕೆ ಗುತ್ತಿಗೆ ಅವಧಿಯನ್ನು ಪರಿಶೀಲಿಸಿ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ತಿಳಿಸಿದರು. ಜತೆಗೆ ಅತಿಕ್ರಮಣ ಮಾಡಿಕೊಂಡಿರುವವರನ್ನು ಕೂಡಲೇ ಎತ್ತಂಗಡಿ ಮಾಡುವಂತೆ ಸೂಚಿಸಿದರು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ದ್ವೀಪಗಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಡ್ರೋಣ್ ಸರ್ವೇ ಮಾಡಿಸಿ ಇನ್ನು ಮೂರು ತಿಂಗಳ ಒಳಗಾಗಿ ವರದಿ ನೀಡುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿಗೆ ಸೂಚಿಸಿದ ಮುಖ್ಯಮಂತ್ರಿ, ಆಂಧ್ರ, ಪ್ರದೇಶ, ವಿಶಾಖಪಟ್ಟಣ, ಕೇರಳ, ತಮಿಳುನಾಡು, ಗುಜರಾತ್‌ನಲ್ಲಿ ಬಂದರುಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂಬುದರ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ತಿಳಿಸಿದರು.

ಮುಂದಿನ ದಿನಗಳಲ್ಲಿ ರಾಜ್ಯದ ಬಂದರು ಅಭಿವೃದ್ಧಿಗೆ ಎಲ್ಲ ರೀತಿಯ ಸಹಕಾರ, ಸೌಲಭ್ಯ ನೀಡುವುದಾಗಿ ಭರವಸೆ ನೀಡಿದ ಮುಖ್ಯಮಂತ್ರಿ, ಇದೇ ಸಂದರ್ಭದಲ್ಲಿ 'ಕರ್ನಾಟಕ ಜಲಸಾರಿಗೆ ನೀತಿ -2024' ಅನ್ನು ಬಿಡುಗಡೆ ಮಾಡಿದರು.

ಸಭೆಯಲ್ಲಿ ಮೀನುಗಾರಿಕೆ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಮಂಕಾಳ ವೈದ್ಯ, ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಇಲಾಖೆಯ ಹಾಗೂ ಮಂಡಳಿಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

| KARNATAKA MARITIME BOARD<br>BENGALURU | | |
|---|---|---|
| Name of the Newspaper | NAGAVI EXPRESS | |
| Date | 23-04-2025 | Language: KANNADA |

## ಕರ್ನಾಟಕ ಜಲಸಾರಿಗೆ ಮಂಡಳಿಯ ಸಭೆ

# ಮಂಗಳೂರು ವಾಟರ್ ಮೆಟ್ರೋಗೆ ಸಿಎಂ ಸಿದ್ದರಾಮಯ್ಯ ಗ್ರೀನ್ ಸಿಗ್ನಲ್



**ನಾಗಾವಿ ಎಕ್ಸ್‌ಪ್ರೆಸ್ ಬೆಂಗಳೂರು**

ಮಂಗಳೂರಿನ ಗುರುಪುರ–ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಪ್ಪಿಗೆ ಸೂಚಿಸಿದರು.

ಕಾವೇರಿ ನಿವಾಸದಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿಯ ಸಭೆಯಲ್ಲಿ, ಇದರ ಜೊತೆಗೆ ಸಾಗರಮಾಲಾ ಯೋಜನೆಯ ಡಿಯಲ್ಲಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸಲು ಸಹ ಮುಖ್ಯಮಂತ್ರಿಯವರು ಒಪ್ಪಿಗೆ ನೀಡಿ ಆದೇಶಿಸಿದ್ದಾರೆ. ರಾಜ್ಯದ ಬಂದರುಗಳ ಅಭಿವೃದ್ಧಿ, ಜಲಸಾರಿಗೆ ಯೋಜನೆಗಳ ಪ್ರಗತಿ, ಸರಕು ಸಾಗಣೆಗೆ ಅವಶ್ಯವಿರುವ ಮೂಲ ಸೌಲಭ್ಯಗಳ ಬಗ್ಗೆ ಸಮಿತಿಯಲ್ಲಿ ಚರ್ಚಿಸಲಾಯಿತು.

ಕರ್ನಾಟಕ ಜಲಸಾರಿಗೆ ಮಂಡಳಿ ಒಟ್ಟು 399 ಹುದ್ದೆಗಳನ್ನು ಹೊಂದಿದ್ದು, ಅದರಲ್ಲಿ 281 ಹುದ್ದೆಗಳು ಖಾಲಿ ಇವೆ. ಖಾಲಿ ಇದ್ದ ಹುದ್ದೆಗಳಲ್ಲಿ ಕೆಲವು ಪ್ರಮುಖ ಪಾತ್ರದ ಹುದ್ದೆಗಳು ಸೇರಿಸಲಾಗಿದ್ದು, ಪರಿಣತಿಯುಳ್ಳ ಹಿರಿಯ ಅಧಿಕಾರಿಗಳನ್ನು ಪಡೆಗಳಿಸುವಂತೆ ಸಿಎಂ ಅವರಿಗೆ ಕೆ.ಎಂ.ಬಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಾಲಚಂದ್ರ ಹೆಚ್ ಅವರು ಮನವಿ ಸಲ್ಲಿಸಿದ್ದು, ಇದಕ್ಕೆ ಸಿಎಂ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

ಕಾರವಾರ ಬಂದರುದಿಂದ ಸರಕು ಸಾಗಣೆಯ ಸಲುವಾಗಿ ಕೊಂಕಣ್ ರೈಲ್ವೇಸ್ ಕಾರ್ಪೊರೇಷನ್ ಲಿಮಿಟೆಡ್ ನ ಸಹಯೋಗದಲ್ಲಿ ಅಮ್ಮಳ್ಳಿ ರೈಲ್ವೆ ಸೈಡಿಂಗ್ ಅಭಿವೃದ್ಧಿಪಡಿಸುವುದರ ಬಗ್ಗೆ ಕೆ.ಎಂ.ಬಿ ಸಿಇಒ ಅವರು ಪ್ರಸ್ತಾವನೆ ಸಲ್ಲಿಸಿದರು.

ರಾಜ್ಯ ಸರ್ಕಾರ 2010 ರಲ್ಲಿ ಹೊನ್ನಾವರ ಬಂದರು ಮಿತಿಯ ಹೊನ್ನಾವರ ಮತ್ತು ಕಾಸರಕೋಡಿನ ಬದಿಯಲ್ಲಿ ಬಾರ್ಜ್/ದೋಣಿ ಲೋಡಿಂಗ್ ಸೌಲಭ್ಯದ ಅಭಿವೃದ್ಧಿಗಾಗಿ ಹೈದರಾಬಾದ್‌ನ ಎಂ/ಎಸ್. ಉತ್ತರ ಕನ್ನಡ ಸಿ ಪೋರ್ಟ್ಸ್ ? ಜಿಎಂಆರ್ ಇಎಲ್ –ಕನ್ಸೋರ್ಟಿಯಂಗೆ 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ 1,37,560 ಚದರ ಮೀಟರ್ ಬಂದರು ಭೂಮಿಯನ್ನು ಮಂಜೂರು ಮಾಡಿದೆ. ಈ ಯೋಜನೆಯ ಅಭಿವೃದ್ಧಿಗಾಗಿ ಹೊನ್ನಾವರ ಮತ್ತು ಕಾಸರಕೋಡಿನ ಬದಿಯಲ್ಲಿ ಬಂದರು ಭೂಮಿಯನ್ನು ಕಾಯ್ದಿರಿಸಲಾಗಿದೆ ಇದಕ್ಕೆ ಸಿಎಂ ಅವರು ಅನುಮತಿ ನೀಡುವಂತೆ ಕೆ.ಎಂ.ಬಿ ಸಿಇಒ ಅವರು ಪ್ರಸ್ತಾವನೆ ಸಲ್ಲಿಸಿದರು.

ಪುನರ್ವಸತಿ, ಬಂದರು ಸಂಬಂಧಿತ ಕಾರ್ಯಾಚರಣೆಗಳಿಗೆ ಭೂಮಿ ಹಂಚಿಕೆ ಗುತ್ತಿಗೆ ಅವಧಿಯನ್ನು ಪರಿಶೀಲಿಸಿ, ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದ್ದು ಜಾಗೆ ಅತಿಕ್ರಮಣ ಮಾಡಿಕೊಂಡಿರುವವರನ್ನು ಕೂಡಲೇ ಎತ್ತಂಗಡಿ ಮಾಡುವಂತೆ ಹಾಗೂ ಉತ್ತರ ಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ದ್ವೀಪಗಳಿಗೆ ಸಂಬಂಧಿಸಿದಂತೆ ಡ್ರೋಣ್ ಮೂಲಕ ಸರ್ವೇ ಮಾಡಿಸಿ, ಇನ್ನು ಮೂರು ತಿಂಗಳ ಒಳಗಾಗಿ ವರದಿ ನೀಡುವಂತೆ ಸಿಎಂ ಉತ್ತರ ಕನ್ನಡ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಆಂಧ್ರ ಪ್ರದೇಶ, ವಿಶಾಖಪಟ್ಟಣ, ಕೇರಳ, ತಮಿಳುನಾಡು, ಗುಜರಾತ್ ಗಳಲ್ಲಿ ಬಂದರುಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂಬುದರ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಬಂದರುಗಳಿಗೆ ಎಲ್ಲಾ ರೀತಿಯ ಸೌಲಭ್ಯ ನೀಡುವುದಾಗಿ ಸಿಎಂ ಅವರು ಭರವಸೆ ನೀಡಿದರು.

ಸಭೆಯಲ್ಲಿ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರಾದ ಮಂಕಾಳ ಎಸ್ ವೈದ್ಯ, ಸರ್ಕಾರದ ಮುಖ್ಯಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಕಾರ್ಯದರ್ಶಿ ಎನ್. ಮಂಜುಳಾ ಸೇರಿದಂತೆ ಅನೇಕ ಅಧಿಕಾರಿಗಳು ಭಾಗವಹಿಸಿದ್ದರು.

| KARNATAKA MARITIME BOARD<br>BENGALURU | | |
|---|---|---|
| Name of the Newspaper | BELLARI VANI | |
| Date | 23-04-2025 | Language: KANNADA |

BALLARI VANI

# ಮಂಗಳೂರು ವಾಟರ್ ಮೆಟ್ರೋಗೆ ಸಿಎಂ ಗ್ರೀನ್ ಸಿಗ್ನಲ್

• ಬಳ್ಳಾರಿ ವಾಣಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕಾವೇರಿ ನಿವಾಸದಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿಯ ಸಭೆ ನಡೆಯಿತು.

ರಾಜ್ಯದ ಬಂದರುಗಳ ಅಭಿವೃದ್ಧಿ, ಜಲಸಾರಿಗೆ ಯೋಜನೆಗಳ ಪ್ರಗತಿ, ಸರಕು ಸಾಗಣೆಗೆ ಅವಶ್ಯವಿರುವ ಮೂಲ ಸೌಲಭ್ಯಗಳ ಬಗ್ಗೆ ಸಮಿತಿಯಲ್ಲಿ ಚರ್ಚಿಸಲಾಯಿತು.

ಮಂಗಳೂರಿನ ಗುರುಪುರ- ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತ ಗೊಳಿಸಲು ಸಿಎಂ ಸಿದ್ದರಾಮಯ್ಯ ಅವರು ಸಭೆಯಲ್ಲಿ ಒಪ್ಪಿಗೆ ಸೂಚಿಸಿದರು.

ಇದರ ಜೊತೆಗೆ ಸಾಗರಮಾಲಾ ಯೋಜನೆಯಡಿಯಲ್ಲಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸಲು ಸಹ ಮುಖ್ಯಮಂತ್ರಿಯವರು ಒಪ್ಪಿಗೆ ನೀಡಿ ಆದೇಶಿಸಿದ್ದಾರೆ.

ಕರ್ನಾಟಕ ಜಲಸಾರಿಗೆ ಮಂಡಳಿ ಒಟ್ಟು 399 ಹುದ್ದೆಗಳನ್ನು ಹೊಂದಿದ್ದು, ಅದರಲ್ಲಿ 281 ಹುದ್ದೆಗಳು ಖಾಲಿ ಇವೆ. ಖಾಲಿ ಇದ್ದ ಹುದ್ದೆಗಳಲ್ಲಿ ಕೆಲವು ಪ್ರಮುಖ ಪಾತ್ರದ ಹುದ್ದೆಗಳು ಸೇರಿಸಲಾಗಿದ್ದು, ಪರಿಣತಿಯುಳ್ಳ ಹಿರಿಯ ಅಧಿಕಾರಿಗಳನ್ನು ಪರಿಗಣಿಸುವಂತೆ ಸಿಎಂ ಅವರಿಗೆ ಕೆ.ಎಂ.ಬಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಾಲಚಂದ್ರ ಹೆಚ್ ಅವರು ಮನವಿ ಸಲ್ಲಿಸಿದ್ದು, ಇದಕ್ಕೆ ಸಿಎಂ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.



ಕಾರವಾರ ಬಂದರುದಿಂದ ಸರಕು ಸಾಗಣೆಯ ಸಲುವಾಗಿ ಕೊಂಕಣ್ ರೈಲ್ವೇಸ್ ಕಾರ್ಪೋರೇಷನ್ ಲಿಮಿಟೆಡ್ ಸಹಯೋಗದಲ್ಲಿ ಅಮೃತ್ ರೈಲ್ವೆ ಸೈಡಿಂಗ್ ಅಭಿವೃದ್ಧಿಪಡಿಸುವುದರ ಬಗ್ಗೆ ಕೆ.ಎಂ.ಬಿ ಸಿಇಒ ಅವರು ಪ್ರಸ್ತಾವಣೆ ಸಲ್ಲಿಸಿದರು.

ರಾಜ್ಯ ಸರ್ಕಾರ 2010 ರಲ್ಲಿ ಹೊನ್ನಾವರ ಬಂದರು ಮಿತಿಯ ಹೊನ್ನಾವರ ಮತ್ತು ಕಾಸರಕೋಡಿನ ಬದಿಯಲ್ಲಿ ಬಾರ್ಜ್/ದೋಣಿ ಲೋಡಿಂಗ್ ಸೌಲಭ್ಯದ ಅಭಿವೃದ್ಧಿಗಾಗಿ ಹೈದರಾಬಾದ್‌ನ ಎಂ/ಎಸ್. ಉತ್ತರ ಕನ್ನಡ ಸಿ ಪೋರ್ಟ್ □ ಜೆವಿ ಪಿಆರ್ ಇಎಲ್ -ಕನ್ಸೋರ್ಟಿಯಂಗೆ 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ 1,37,560 ಚದರ ಮೀಟರ್ ಬಂದರು ಭೂಮಿಯನ್ನು ಮಂಜೂರು ಮಾಡಿದೆ. ಈ ಯೋಜನೆಯ ಅಭಿವೃದ್ಧಿಗಾಗಿ ಹೊನ್ನಾವರ ಮತ್ತು ಕಾಸರಕೋಡಿನ ಬದಿಯಲ್ಲಿ ಬಂದರು ಭೂಮಿಯನ್ನು ಕಾಯ್ದಿರಿಸಲಾಗಿದೆ ಇದಕ್ಕೆ ಸಿಎಂ ಅವರು ಅನುಮತಿ ನೀಡುವಂತೆ ಕೆ.ಎಂ.ಬಿ ಸಿಇಒ ಅವರು ಪ್ರಸ್ತಾವನೆ ಸಲ್ಲಿಸಿದರು.

ಪುನರ್ ಸಹಿತ, ಬಂದರು ಸಂಬಂಧಿತ ಕಾರ್ಯಾಚರಣೆಗಳಿಗೆ ಭೂಮಿ ಹಂಚಿಕೆ ಗುತ್ತಿಗೆ ಅವಧಿಯನ್ನು ಪರಿಶೀಲಿಸಿ, ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದ್ದು ಜಾಗೆ ಅತಿಕ್ರಮಣ ಮಾಡಿಕೊಂಡಿರುವವರನ್ನು ಕೂಡಲೇ ಎತ್ತಂಗಡಿ ಮಾಡುವಂತೆ ಅಧಿಕಾರಿಗಳಿಗೆ ಸಿಎಂ ಸೂಚಿಸಿದರು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ದ್ವೀಪಗಳಿಗೆ ಸಂಬಂಧಿಸಿದಂತೆ ಡ್ರೋಣ್ ಮೂಲಕ ಸರ್ವೇ ಮಾಡಿಸಿ, ಇನ್ನು ಮೂರು ತಿಂಗಳ ಒಳಗಾಗಿ ವರದಿ ನೀಡುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಆಂಧ್ರ ಪ್ರದೇಶ, ವಿಶಾಖಪಟ್ಟಣ, ಕೇರಳ, ತಮಿಳು ನಾಡು, ಗುಜರಾತ್ ಗಳಲ್ಲಿ ಬಂದರುಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂಬುದರ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಬಂದರುಗಳಿಗೆ ಎಲ್ಲಾ ರೀತಿಯ ಸೌಲಭ್ಯ ನೀಡುವುದಾಗಿ ಸಿಎಂ ಅವರು ಭರವಸೆ ನೀಡಿದರು.

ಸಭೆಯಲ್ಲಿ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರಾದ ಮಂಕಾಳ ಎಸ್ ವೈದ್ಯ, ಸರ್ಕಾರದ ಮುಖ್ಯಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಕಾರ್ಯದರ್ಶಿ ಎನ್ ಮಂಜುಳಾ ಸೇರಿದಂತೆ ಅನೇಕ ಅಧಿಕಾರಿಗಳು ಭಾಗವಹಿಸಿದರು.

| KARNATAKA MARITIME BOARD<br>BENGALURU | | |
|---|---|---|
| Name of the Newspaper | UDAYAVANI | |
| Date | 23-04-2025 | Language: KANNADA |

ಉದಯವಾಣಿ
ಜನಮನದ ಜೀವನಾಡಿ



# ಗುರುಪುರ-ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ: ಜಲಸಾರಿಗೆ ಮಂಡಳಿ ಅನುಮೋದನೆ

ಅ ಅ ಅ

**TEAM UDAYAVANI**, APR 24, 2025, 7:10 AM IST



**ಬೆಂಗಳೂರು:** ಬಹುನಿರೀಕ್ಷಿತ ಮಂಗಳೂರಿನ ಗುರುಪುರ-ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತಗೊಳಿಸಲು ಬುಧವಾರ ಕರ್ನಾಟಕ ಜಲಸಾರಿಗೆ ಮಂಡಳಿ ಅನುಮೋದನೆ ನೀಡಿತು.

ಸಿಎಂ ಅಧಿಕೃತ ನಿವಾಸ "ಕಾವೇರಿ'ಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಜರಗಿದ ಸಭೆಯಲ್ಲಿ ಒಳನಾಡು ಮತ್ತು ಜಲಸಾರಿಗೆ ಸಚಿವ ಮಂಕಾಳ ವೈದ್ಯ ಭಾಗವಹಿಸಿದ್ದರು. ಸಭೆಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಸಂಬಂಧ ಪ್ರಸ್ತಾವನೆ ಮಂಡಿಸಲಾಯಿತು. ಈ ಕುರಿತು ಚರ್ಚಿಸಿ, ಯೋಜನೆ ಕಾರ್ಯಗತಗೊಳಿಸಲು ಅನುಮೋದನೆ ನೀಡಲಾಯಿತು.

ಕೊಚ್ಚಿ ಮಾದರಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಮೊದಲ ವಾಟರ್ ಮೆಟ್ರೋ ಯೋಜನೆಯು ಕೂಳೂರು ಸೇತುವೆ, ಹೊಸ ಮಂಗಳೂರು ಬಂದರು, ಸುಲ್ತಾನ್ ಬ್ಯಾಟರಿ, ತಣ್ಣೀರುಬಾವಿ, ಹಳೆಯ ಬಂದರು ಸಹಿತ ಸುಮಾರು 17 ಪಾಯಿಂಟ್‌ಗಳ ಮೂಲಕ ಹಾದುಹೋಗಲಿದ್ದು, ಬಾಜಲ್- ಮರವೂರು ಬ್ರಿಡ್ಜ್ ನಡುವೆ ಒಟ್ಟಾರೆ 30 ಕಿ.ಮೀ. ಉದ್ದದ ಮಾರ್ಗ ಇದಾಗಿರಲಿದೆ.

ಇದಲ್ಲದೆ, ರಾಜ್ಯದ ಬಂದರುಗಳು ಅಭಿವೃದ್ಧಿ, ಜಲಸಾರಿಗೆ ಯೋಜನೆಗಳ ಪ್ರಗತಿ, ಸರಕು ಸಾಗಣೆಗೆ ಅವಶ್ಯವಿರುವ ಮೂಲ ಸೌಲಭ್ಯಗಳ ಬಗ್ಗೆ ಸಮಿತಿಯಲ್ಲಿ ಚರ್ಚಿಸಲಾಯಿತು. ಈ ವೇಳೆ ಸಾಗರಮಾಲಾ ಯೋಜನೆಯಡಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಮುಖ್ಯಮಂತ್ರಿ ಒಪ್ಪಿಗೆ ನೀಡಿದರು.

ಇದರ ಜತೆಗೆ ಪುನರ್‌ವಸತಿ, ಬಂದರು ಸಂಬಂಧಿತ ಕಾರ್ಯಾಚರಣೆಗಳಿಗೆ ಭೂಮಿ ಹಂಚಿಕೆ ಗುತ್ತಿಗೆ ಅವಧಿಯನ್ನು ಪರಿಶೀಲಿಸಿ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದ್ದು, ಅತಿಕ್ರಮಣ ಮಾಡಿಕೊಂಡಿರುವವರನ್ನು ಕೂಡಲೇ ಎತ್ತಂಗಡಿ ಮಾಡುವಂತೆ ಸೂಚನೆ ನೀಡಿದರು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ದ್ವೀಪಗಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿ ಡ್ರೋನ್ ಸರ್ವೇ ಮಾಡಿಸಿ ಮುಂದಿನ ಮೂರು ತಿಂಗಳ ಒಳಗೆ ವರದಿ ನೀಡುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿಗೆ ಇದೇ ವೇಳೆ ಸೂಚಿಸಿದರು.

ಅಲ್ಲದೆ ಆಂಧ್ರಪ್ರದೇಶ, ವಿಶಾಖಪಟ್ಟಣ, ಕೇರಳ, ತಮಿಳುನಾಡು, ಗುಜರಾತ್‌ಗಳಲ್ಲಿ ಬಂದರುಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂಬುದರ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಸಿಎಂ, ಮುಂದಿನ ದಿನಗಳಲ್ಲಿ ರಾಜ್ಯದ ಬಂದರು ಅಭಿವೃದ್ಧಿಗೆ ಎಲ್ಲ ರೀತಿಯ ಸಹಕಾರ, ಸೌಲಭ್ಯ ನೀಡುವುದಾಗಿ ಭರವಸೆ ನೀಡಿದರು.

| KARNATAKA MARITIME BOARD<br>BENGALURU | | |
|---|---|---|
| Name of the Newspaper | VARTHA BHARATHI | |
| Date | 23-04-2025 | Language: KANNADA |

ಜನದನಿಯ ಸಾರಥಿ

ವಾರ್ತಾಭಾರತಿ

# 'ಮಂಗಳೂರು ವಾಟರ್ ಮೆಟ್ರೋ ಯೋಜನೆ'ಗೆ ಸಿಎಂ ಸಿದ್ದರಾಮಯ್ಯ ಅನುಮೋದನೆ

ವಾರ್ತಾಭಾರತಿ 23 Apr 2025 8:32 PM IST



ಬೆಂಗಳೂರು: ಮಂಗಳೂರಿನ ಗುರುಪುರ-ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತ ಗೊಳಿಸುವ ಪ್ರಸ್ತಾವನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಮೋದನೆ ನೀಡಿದರು.

ಬುಧವಾರ ತಮ್ಮ ಸರಕಾರಿ ನಿವಾಸ ಕಾವೇರಿಯಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿಯ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ರಾಜ್ಯದ ಬಂದರುಗಳ ಅಭಿವೃದ್ಧಿ, ಜಲಸಾರಿಗೆ ಯೋಜನೆಗಳ ಪ್ರಗತಿ, ಸರಕು ಸಾಗಣೆಗೆ ಅವಶ್ಯವಿರುವ ಮೂಲ ಸೌಲಭ್ಯಗಳ ಬಗ್ಗೆ ಚರ್ಚೆ ನಡೆಸಿದರು.

ಸಾಗರಮಾಲಾ ಯೋಜನೆಯಡಿಯಲ್ಲಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಒಪ್ಪಿಗೆ ನೀಡಿದ ಮುಖ್ಯಮಂತ್ರಿ, ಪುನರ್ವಸತಿ, ಬಂದರು ಸಂಬಂಧಿತ ಕಾರ್ಯಾಚರಣೆಗಳಿಗೆ ಭೂಮಿ ಹಂಚಿಕೆ ಗುತ್ತಿಗೆ ಅವಧಿಯನ್ನು ಪರಿಶೀಲಿಸಿ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ತಿಳಿಸಿದರು. ಜತೆಗೆ ಅತಿಕ್ರಮಣ ಮಾಡಿಕೊಂಡಿರುವವರನ್ನು ಕೂಡಲೇ ಎತ್ತಂಗಡಿ ಮಾಡುವಂತೆ ಸೂಚಿಸಿದರು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ದ್ವೀಪಗಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಡ್ರೋಣ್ ಸರ್ವೇ ಮಾಡಿಸಿ ಇನ್ನು ಮೂರು ತಿಂಗಳ ಒಳಗಾಗಿ ವರದಿ ನೀಡುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿಗೆ ಸೂಚಿಸಿದ ಮುಖ್ಯಮಂತ್ರಿ, ಆಂಧ್ರ ಪ್ರದೇಶ, ವಿಶಾಖಪಟ್ಟಣ, ಕೇರಳ, ತಮಿಳುನಾಡು, ಗುಜರಾತ್‌ನಲ್ಲಿ ಬಂದರುಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂಬುದರ ಬಗ್ಗೆ ಅಧ್ಯಯನ ಮಾಡಿ ವರದಿ ಸಲ್ಲಿಸಲು ಅಧಿಕಾರಿಗಳಿಗೆ ತಿಳಿಸಿದರು.

ಮುಂದಿನ ದಿನಗಳಲ್ಲಿ ರಾಜ್ಯದ ಬಂದರು ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಕಾರ, ಸೌಲಭ್ಯ ನೀಡುವುದಾಗಿ ಭರವಸೆ ನೀಡಿದ ಮುಖ್ಯಮಂತ್ರಿ, ಇದೇ ಸಂದರ್ಭದಲ್ಲಿ 'ಕರ್ನಾಟಕ ಜಲಸಾರಿಗೆ ನೀತಿ -2024' ಅನ್ನು ಬಿಡುಗಡೆ ಮಾಡಿದರು.

ಸಭೆಯಲ್ಲಿ ಮೀನುಗಾರಿಕೆ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಮಂಕಾಳು ವೈದ್ಯ, ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಇಲಾಖೆಯ ಹಾಗೂ ಮಂಡಳಿಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

| KARNATAKA MARITIME BOARD<br>BENGALURU | | |
|---|---|---|
| Name of the Newspaper | THE HINDU | |
| Date | 23-04-2025 | Language: KANNADA |

THE HINDU

# Chief Minister approves Mangaluru water metro project

**Karnataka Maritime Board will prepare a detailed project report and, if implemented, it is slated to become the second-largest water transport system in India after Kochi**

Updated – April 24, 2025 09:54 am IST – Bengaluru

THE HINDU BUREAU

READ LATER PRINT



A water metro ferry leaves from the High Court terminal in Kochi. The Mangaluru water metro project has been proposed on the lines of the one in Kerala. | Photo Credit: file photo

Chief Minister Siddarmaiah on Wednesday approved the proposed Mangaluru water metro project that will connect Bajal to Maravoor on both banks of the Netravati and Gurupura rivers.

Continue reading after this ADVERTISEMENT

With multiple connectivity facilities like national highways, ports and airport in Mangaluru, the Karnataka Maritime Board (KMB) proposed a water metro project on the lines of Kochi in Kerala, officials said.

The KMB will prepare a detailed project report for the project, and if implemented, it is slated to become the second-largest water transport system in India after Kochi, officials said.

https://www.thehindu.com/news/cities/bangalore/chief-minister-approves-mangaluru-water-metro-project/article69483439.ece

| KARNATAKA MARITIME BOARD<br>BENGALURU | | |
|---|---|---|
| Name of the Newspaper | KANNADA HINDUSTAN TIMES | |
| Date | 23-04-2025 | Language: KANNADA |

HT ಕನ್ನಡ

## ದಕ್ಷಿಣ ಕನ್ನಡದ ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಜಾರಿ; ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆ ಸಭೆಯಲ್ಲಿ ಅನುಮತಿ

Umesha Bhatta P H • HT Kannada
• Published Apr 23, 2025 06:59 PM IST

ನಮ್ಮನ್ನು ಫಾಲೋ ಮಾಡಿ

Share

ಕರ್ನಾಟಕದ ಕರಾವಳಿ ಭಾಗದಲ್ಲೂ ವಾಟರ್ ಮೆಟ್ರೋ ಆರಂಭಿಸಬೇಕು ಎನ್ನುವ ಬೇಡಿಕೆಗೆ ಬಲ ಬಂದಿದ್ದು, ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಅನುಮತಿ ನೀಡಿದ್ದಾರೆ.



ಮಂಗಳೂರಲ್ಲಿ ವಾಟರ್ ಮೆಟ್ರೋ ಯೋಜನೆಗೆ ಅನುಮತಿ ದೊರೆತಿದೆ.

ಬೆಂಗಳೂರು: ಕೇರಳದ ನಂತರ ಕರ್ನಾಟಕ ಕರಾವಳಿ ಭಾಗದಲ್ಲೂ ವಾಟರ್ ಮೆಟ್ರೋ ಯೋಜನೆ ಜಾರಿಯಾಗಲಿದ್ದು, ಮಂಗಳೂರು ಸಮೀಪದಲ್ಲಿ ಇದನ್ನು ಅನುಷ್ಠಾನಗೊಳಿಸಲು ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕಾವೇರಿ ನಿವಾಸದಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿಯ ಸಮಿತಿ ಸಭೆ ಅನುಮತಿ ನೀಡಿದೆ. ಮಂಗಳೂರಿನ ಗುರುಪುರ-ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತ ಗೊಳಿಸುವ ಪ್ರಸ್ತಾವನೆಗೆ ಅನುಮೋದನೆ ನೀಡಿದರು, ಕಳೆದ ತಿಂಗಳು ಮಂಡಿಸಿದ್ದ ಕರ್ನಾಟಕ ಬಜೆಟ್ ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಾಟರ್ ಮೆಟ್ರೊ ಆರಂಭಿಸುವ ಘೋಷಣೆಯನ್ನು ಮಾಡಿದ ಚಟುವಟಿಕೆ ಗರಿಗೆದರಿದ್ದವು. ಈಗಿನ ಯೋಜನೆಯ ಪ್ರಕಾರವೇ ನಡೆದರೆ, 2026ರಲ್ಲಿ ಯಾವುದಾದರೂ ಮಂಗಳೂರಿನಲ್ಲಿ ವಾಟರ್ ಮೆಟ್ರೋ ಸೇವೆ ಆರಂಭಗೊಳ್ಳಲಿದೆ. ಬೆಳೆಯುತ್ತಿರುವ ಮಂಗಳೂರಿನ ಸಾರಿಗೆ ನಿಯಂತ್ರಣಕ್ಕೂ ಇದು ಸಹಕಾರಿಯಾಗಬಹುದು ಎನ್ನುವ ಅಭಿಪ್ರಾಯಗಳೂ ದಟ್ಟವಾಗಿವೆ.

### ಹೇಗಿರಲಿದೆ ಯೋಜನೆ

ಮಂಗಳೂರಿನಲ್ಲಿ ವಾಟರ್ ಮೆಟ್ರೋ ಸ್ಟೇಷನ್ ಸ್ಥಾಪನೆಗೆ ಬೇಕಾದ ಜಾಗ ಕುರಿತು ಸರ್ವೆ ಇನ್ನಷ್ಟೇ ಆರಂಭವಾಗಬೇಕಿದೆ. ಮುಂದಿನ 25 ವರ್ಷಗಳಲ್ಲಿ ಮಂಗಳೂರು ನಗರದ ಬೆಳವಣಿಗೆಯ ಸಾಧ್ಯತೆ ಮತ್ತು ಬೇಡಿಕೆ ಆಧರಿಸಿ ಎಲ್ಲಿ ಸ್ಟೇಷನ್ ಮಾಡಿದರೆ ಒಳ್ಳೆಯದೋ ಅಲ್ಲಿ ಮೆಟ್ರೋ ಸ್ಟೇಷನ್ ನ ಮಾಡುವ ಬಗ್ಗೆ ಸರ್ವೆ ನಡೆಯಲಿದೆ.

ನೇತ್ರಾವತಿಯಿಂದ ಫಲ್ಗುಣಿ ನದಿಯ ಮರವುರುವರೆಗೆ 30 ಕಿಲೋಮೀಟರ್ ದೂರ ಇದೆ ಸಮುದ್ರದ ಹಿನ್ನೀರಿನಿಂದಾಗಿ ಅಂದರೆ ಸಮುದ್ರದ ಬ್ಯಾಕ್ ವಾಟರ್ ಇಂದಾಗಿ ವರ್ಷಪೂರ್ತಿ ನೀರು ಇರುತ್ತದೆ ಹೀಗಾಗಿ ಬಜಾಜ್ ಪ್ರದೇಶದಿಂದ ತೊಡಗಿ ನೇತ್ರಾವತಿ ನದಿ ಆಗಿ ಬೆಂಗ್ರೆ ಅಳಿವಿನ ಬಾಗಿಲು ಬೇಳೂರು ಸುಲ್ತಾನ್ ಬತ್ತೇರಿ ಕೂಳೂರು ಮರ ಊರು ಗುರುಪುರದವರೆಗೆ ಇಡೀ ಮಂಗಳೂರು ನಗರವನ್ನು ಸುತ್ತು ಹಾಕುವಂತೆ ಜಲ ಸಾರಿಗೆ ತರುವುದಕ್ಕೆ ಪ್ರಸ್ತಾಪ ಮಾಡಲಾಗಿದೆ.

ಇದರ ಮಧ್ಯೆ 17 ಕಡೆ ಮೆಟ್ರೋ ಸ್ಟೇಷನ್ ಮಾದರಿಯಲ್ಲಿ ಬೋಟ್ ನಿಂದ ಇಳಿದು ಹತ್ತುವುದಕ್ಕೆ ಹಾದಿಯುವುದಕ್ಕೂ ನಿಲ್ದಾಣ ನಿರ್ಮಿಸುವ ಯೋಜನೆಯೂ ಸರ್ಕಾರದ ಹಂತದಲ್ಲಿದೆ. ಈಗ ಅನುಮತಿ ನೀಡಿರುವುದರಿಂದ ಕೆಲವೇ ದಿನಗಳಲ್ಲಿ ಸ್ಪಷ್ಟ ಚಿತ್ರಣ ಸಿಗಬಹುದು.

ವಾಟರ್ ಮೆಟ್ರೋ ಸಾರಿಗೆಯಿಂದ ಮಂಗಳೂರಿನ ಹಳೆ ಮೀನುಗಾರಿಕಾ ಬಂದರು ರಸ್ತೆಯಲ್ಲಿ ಅತಿಯಾದ ದಟ್ಟಣೆ ತಪ್ಪಲಿದೆ ಎಂದು ನಂಬಲಾಗಿದೆ. ಸರಕು ಸಾಗಾಣಿಕೆಗಾಗಿ ರೋರು ಸೇವೆಗಳನ್ನು ಬಳಸಿಕೊಳ್ಳಲು ಅವಕಾಶ ಸಿಗಲಿದೆ ಎಂಬ ಲೆಕ್ಕಾಚಾರ ಇದೆ ಪ್ರಯಾಣಿಕರ ಸೇವೆ ಮಾದರಿಯಲ್ಲಿಯೇ ಸರಕು ಸಾಗಾಣಿಯ ಉದ್ದೇಶಕ್ಕೂ ಜಲ ಸಾರಿಗೆ ಎಂದು ಬಳಸಿಕೊಳ್ಳುವ ಕುರಿತು ಯೋಜಿಸಲಾಗುತ್ತಿದೆ.

ಕೇರಳದ ಕೊಚ್ಚಿ ಮಾದರಿಯಲ್ಲಿ ಮಂಗಳೂರು ನಗರವನ್ನು ನೇತ್ರಾವತಿ ಮತ್ತು ಪಲ್ಗುಣಿ ನದಿಗಳು ಸುತ್ತುವರಿದು ಹರಿಯುತ್ತಿರುವುದರಿಂದ ಇದೇ ಮಾರ್ಗದಲ್ಲಿ ವಾಟರ್ ಮೆಟ್ರೋ ಚಾಲ್ತಿಗೆ ತರಲು ಯೋಜನೆ ಹಾಕಲಾಗಿದೆ ರಾಷ್ಟ್ರೀಯ ಜಲ ಸಾರಿಗೆ ಯೋಜನೆ ಅಡಿ ಬಜಾಜ್ ನಿಂದ ಪಲ್ಗುಣಿ ನದಿ ಮೂಲಕ ಮರ ಊರು ಗುರುಪುರದವರೆಗೆ ಮೆಟ್ರೋ ಸಾರಿಗೆ ತರುವುದಕ್ಕೆ ಯೋಜನೆ ಆಗಲಿದೆ ಎನ್ನಲಾಗುತ್ತಿದೆ.

### ಕೇರಳದಲ್ಲಿ ಹೇಗಿದೆ

ಕೇರಳ ರಾಜ್ಯದ ಕೊಚ್ಚಿನ್ ಭಾರತದ ಮೊದಲ ವಾಟರ್ ಮೆಟ್ರೋ ಹೊಂದಿರುವ ನಗರವಾಗಿದೆ 2023ರ ಏಪ್ರಿಲ್ 25ರಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇದನ್ನು ಲೋಕಾರ್ಪಣೆ ಮಾಡಿದ್ದರು. ಕೊಚ್ಚಿ ಜಲಸಾರಿಗೆಯಲ್ಲಿ 78 ಬೋಟ್ ವಾಟರ್ ಮೆಟ್ರೋ ಟರ್ಮಿನಲ್ ಒಳಗೊಂಡಿದ್ದು, ಕೊಚ್ಚಿಯನ್ನು ಆವರಿಸಿರುವ ವೆಂಬನಾಡ್ ಸರೋವರದಲ್ಲಿ ಬರುವ 10 ದ್ವೀಪಗಳನ್ನು ಇದು ಸಂಪರ್ಕಿಸಲಿದೆ. ಒಟ್ಟು 76 ಕಿಲೋಮೀಟರ್ ಉದ್ದಕ್ಕೆ ಸಂಚರಿಸಲು ಅವಕಾಶ ಕಲ್ಪಿಸಲಾಗಿದೆ. ಸಂಪೂರ್ಣ ಏರ್ ಕಂಡೀಶನ್ ಇರುವ ಈ ಮೆಟ್ರೋ ಸಾರಿಗೆಯು ಕೊಚ್ಚಿ ಮೆಟ್ರೋ ರೈಲು ವ್ಯವಸ್ಥೆಯೊಂದಿಗೆ ಸಂಪರ್ಕ ಹೊಂದಿದ್ದು ಬಸ್ ಟರ್ಮಿನಲ್ ಮೆಟ್ರೋ ನೆಟ್‌ವರ್ಕ್ ಮತ್ತು ರೈಲ್ವೆ ಜೊತೆ ಕನೆಕ್ಟ್ ಆಗಿದೆ. ಕೊಚ್ಚಿ ವಾಟರ್ ಮೆಟ್ರೋದಲ್ಲಿ 100 ಮತ್ತು 50 ಜನರ ಸಾಮರ್ಥ್ಯದ ಎರಡು ಮಾದರಿಯ ಪ್ಯಾಸೆಂಜರ್ ಬೋಟ್ ಅನ್ನು ಅಳವಡಿಸಲಾಗಿದೆ.

https://kannada.hindustantimes.com/karnataka/karnataka-government-to-take-up-mangaluru-water-metro-project-near-gurupur-in-netravati-river-of-dakshina-kannada-kub-181745414180319.html

| KARNATAKA MARITIME BOARD<br>BENGALURU | | |
|---|---|---|
| Name of the Newspaper | REPORTER KARNATAKA | |
| Date | 23-04-2025 | Language: KANNADA |

ಅಶೋಕ್ ಕಲ್ಲಡ್ಕ ಸಾರಥ್ಯದಲ್ಲಿ...

ರಿಪೋರ್ಟರ್ ಕರ್ನಾಟಕ

ವಾಸ್ತವದ ಕೈಗನ್ನಡಿ reporterkarnataka.com

# Water Metro | ಗುರುಪುರ- ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆಗೆ ರಾಜ್ಯ ಸರಕಾರ ಅನುಮೋದನೆ

23/04/2025, 20:01



**ಮಂಗಳೂರು(reporterkarnataka.com):** ಮಂಗಳೂರಿನ ಗುರುಪುರ- ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತ ಗೊಳಿಸುವ ಪ್ರಸ್ತಾವನೆಗೆ ರಾಜ್ಯ ಸರಕಾರ ಅನುಮೋದನೆ
ನೀಡಿದೆ.



https://reporterkarnataka.com/water-metro-state-government-approves-mangalore-water-metro-project-on-gurupura-netravati-river/

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಕಾವೇರಿಯಲ್ಲಿ ನಡೆದ ಕರ್ನಾಟಕ ಜಲಸಾರಿಗೆ ಮಂಡಳಿಯ ಸಭೆಯಲ್ಲಿ ಮುಖ್ಯಮಂತ್ರಿ ಒಪ್ಪಿಗೆ ನೀಡಿದರು.
*ಮುಖ್ಯಾಂಶಗಳು:*

* ರಾಜ್ಯದ ಬಂದರುಗಳು ಅಭಿವೃದ್ಧಿ, ಜಲಸಾರಿಗೆ ಯೋಜನೆಗಳ ಪ್ರಗತಿ, ಸರಕು ಸಾಗಣೆಗೆ ಅವಶ್ಯವಿರುವ ಮೂಲ ಸೌಲಭ್ಯಗಳ ಬಗ್ಗೆ ಸಮಿತಿಯಲ್ಲಿ ಚರ್ಚಿಸಲಾಯಿತು.

* ಮಂಗಳೂರಿನ ಗುರುಪುರ- ನೇತ್ರಾವತಿ ನದಿಯಲ್ಲಿ ಮಂಗಳೂರು ವಾಟರ್ ಮೆಟ್ರೋ ಯೋಜನೆ ಕಾರ್ಯಗತ ಗೊಳಿಸುವ ಪ್ರಸ್ತಾವನೆಗೆ ಅನುಮೋದನೆ ನೀಡಿದರು.

* ಸಾಗರಮಾಲಾ ಯೋಜನೆಯಡಿಯಲ್ಲಿ ಮಂಗಳೂರಿನಲ್ಲಿ ಕರ್ನಾಟಕ ಜಲಸಾರಿಗೆ ತರಬೇತಿ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಮುಖ್ಯಮಂತ್ರಿಯವರು ಒಪ್ಪಿಗೆ ನೀಡಿದರು.